# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 690 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 22.09.2022 |
| ಉತ್ತರಿಸುವ ಸಚಿವರು | : | ಮುಖ್ಯಮಂತ್ರಿ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ರಾಜ್ಯದಲ್ಲಿ ಪ್ರಸ್ತುತ ಬಿ.ಪಿ.ಎಲ್ ಪಡಿತರ ಚೀಟಿಗಳನ್ನು ಹೊಂದಿರುವ ಕುಟುಂಬಗಳ ಸಂಖ್ಯೆ ಎಷ್ಟು; | ಕರ್ನಾಟಕ ರಾಜ್ಯದಲ್ಲಿ ಒಟ್ಟು 10,90,755 ಅಂತ್ಯೋದಯ ಅನ್ನ, 1,26,73,807 ಆದ್ಯತಾಪಡಿತರ ಚೀಟಿಗಳು ಚಾಲ್ತಿಯಲ್ಲಿರುತ್ತವೆ. |
| ಆ | ಇಲ್ಲಿಯವರೆಗೂ ಬಿ.ಪಿ.ಎಲ್ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿರುವ ಕುಟುಂಬಗಳ ಸಂಖ್ಯೆ ಎಷ್ಟು; (ಅರ್ಜಿ ಸಲ್ಲಿಸಿದ ದಿನಾಂಕವನ್ನು ಒಳಗೊಂಡಂತೆ ಮಾಹಿತಿ ನೀಡುವುದು) | ಆದ್ಯತಾ ಪಡಿತರ ಚೀಟಿಯನ್ನು ಕೋರಿ 2019-20ನೇ ಸಾಲಿನಿಂದ ಇಲ್ಲಿಯವರೆಗೂ ಒಟ್ಟು 11,97,377 ಅರ್ಜಿಗಳು ಸ್ವೀಕೃತವಾಗಿದ್ದು 5,98,849 ಆದ್ಯತಾ ಪಡಿತರ ಚೀಟಿಗಳನ್ನು ವಿತರಣೆ ಮಾಡಲಾಗಿರುತ್ತದೆ. 3,28,107 ಅರ್ಜಿಗಳು ವಿಲೇವಾರಿಗೆ ಬಾಕಿ ಇರುತ್ತದೆ. |
| ಇ | ಬಿ.ಪಿ.ಎಲ್ ಪಡಿತರ ಚೀಟಿಯನ್ನು ಪಡೆಯಲು ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳೇನು; | ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br>• ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>• ಗ್ರಾಮೀಣ ಪ್ರದೇಶಗಲಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>• ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು. |

| | | |
|---|---|---|
| | | • ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು. |
| ಈ | ಪ್ರಸ್ತುತ ಬಿ.ಪಿ.ಎಲ್ ಪಡಿತರ ಚೀಟಿಗಳನ್ನು ರದ್ದುಪಡಿಸಿದರೆ, ಅದರ ಮಾಹಿತಿಯನ್ನು ನೀಡುವುದು ಮತ್ತು ರದ್ದು ಪಡಿಸಲು ಕಾರಣಗಳೇನು; ಯಾವ ನಿಯಮದ ಅನುಸಾರ ರದ್ದುಪಡಿಸಲಾಗುತ್ತದೆ ಮತ್ತು ರದ್ದುಪಡಿಸುವ ಅಧಿಕಾರ ಮತ್ತು ಹೊಸ ಪಡಿತರ ಚೀಟಿಗಳನ್ನು ನೀಡುವ ಅಧಿಕಾರ ಯಾವ ಅಧಿಕಾರಿಗಳಿಗಿದೆ; | ಸರ್ಕಾರವು ರೂಪಿಸಿರುವ ಮಾನದಂಡಗಳಿಗೆ ವಿರುದ್ಧವಾಗಿ ಅಂತ್ಯೋದಯ ಅನ್ನ ಮತ್ತು ಆದ್ಯತಾ ಪಡಿತರ ಚೀಟಿಗಳನ್ನು ಹೊಂದಿರುವ ಅನರ್ಹರ ಬಗ್ಗೆ ವಿವಿಧ ಇಲಾಖೆಗಳಿಂದ ಪಡೆದುಕೊಂಡಿರುವ ದತ್ತಾಂಶದ ಆಧಾರದಲ್ಲಿ ಅನರ್ಹರೆಂದು ಗುರುತಿಸಲ್ಪಟ್ಟ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳಾಗಿ ಪರಿವರ್ತಿಸಲಾಗಿದೆ.<br>ಜಂಟಿ ಖಾತೆಯಲ್ಲಿರುವ ಜಮೀನುಗಳಿಗೆ ಸಂಬಂಧಿಸಿದಂತೆ ಕಂದಾಯ ಇಲಾಖೆಯಿಂದ ಹಾಗೂ ಗ್ರಾಮ ಲೆಕ್ಕಾಧಿಕಾರಿಗಳು ಮತ್ತು ರಾಜಸ್ವ ನಿರೀಕ್ಷಕರವರುಗಳಿಂದ ಲಿಖಿತ ವರದಿ ಪಡೆದು ಪರಿಶೀಲಿಸಿ ಮೂರು ಹೆಕ್ಟರ್ ಗಿಂತ ಹೆಚ್ಚು ಕೃಷಿ ಭೂಮಿಯನ್ನು ಹೊಂದಿದ್ದು, ಒಂದೇ ಕುಟುಂಬದಲ್ಲಿ ವಾಸವಿರುವ ನೈಜವಾದ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳಾಗಿ ಪರಿವರ್ತಿಸಲಾಗಿದೆ.<br>ಪಡಿತರ ಚೀಟಿಗಳನ್ನು ವಿತರಿಸುವಾಗ ಪ್ರತಿಯೊಬ್ಬ ಫಲಾನುಭವಿಗಳಿಂದ ತಾವು ಸರ್ಕಾರ ನಿಗದಿಪಡಿಸಿರುವ ಹೊರಗಿಡುವ ಮಾನದಂಡಗಳ ವ್ಯಾಪ್ತಿಗೆ ಬರುವುದಿಲ್ಲವೆಂಬ ಸ್ವಯಂ ಘೋಷಣೆ ಪಡೆದು ಪಡಿತರ ಚೀಟಿಗಳನ್ನು ವಿತರಿಸಲಾಗಿದೆ. ಸರ್ಕಾರದ ನಿಯಮಗಳು ಹೀಗಿದ್ದರೂ ಕೆಲವು ಸರ್ಕಾರಿ/ಸರ್ಕಾರದನಿಗಮ/ಮಂಡಳಿ/ಪ್ರಾಧಿಕಾರ/ವಿಶ್ವ ವಿದ್ಯಾಲಯ/ ಸಂಸ್ಥೆಯ ಅಧಿಕಾರಿ/ನೌಕರರು ಮತ್ತು ಅವರ ಅವಲಂಬಿತ ಕುಟುಂಬ ವರ್ಗದವರು ಸರ್ಕಾರವು ಅರ್ಹರಿಗೆ ವಿತರಿಸುವ ಅಂತ್ಯೋದಯ ಅನ್ನ ಮತ್ತು ಆದ್ಯತಾ ಪಡಿತರ ಚೀಟಿಗಳನ್ನು ಪಡೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಕೆಲವು ಇಲಾಖೆಗಳ ಜೊತೆ ವ್ಯವಹರಿಸಿ ಆದಾಯ ತೆರಿಗೆ ಪಾವತಿದಾರರು, ಜಿ.ಎಸ್.ಟಿ ಪಾವತಿದಾರರು, ಸರ್ಕಾರಿ ಮತ್ತು ಅರೆ ಸರ್ಕಾರಿ ನೌಕರರು, ದೊಡ್ಡ ಭೂ ಹಿಡುವಳಿದಾರರು ಹಾಗೂ ಹೆಚ್ಚಿನ ವಾರ್ಷಿಕ ಆದಾಯ ಹೊಂದಿರುವ ಕುಟುಂಬಗಳನ್ನು ದಾಖಲೆ ಮತ್ತು ದತ್ತಾಂಶದ ಆಧಾರದಲ್ಲಿ ಪತ್ತೆ ಮಾಡಲಾಗಿರುತ್ತದೆ. ಇದರ ಆಧಾರದ ಮೇಲೆ ಸ್ಥಳ ತನಿಖೆ ನಡೆಸಿ ಪಡಿತರ ಚೀಟಿದಾರರು ಅನರ್ಹರೆಂದು ಕಂಡುಬಂದಲ್ಲಿ ಆಹಾರ ನಿರೀಕ್ಷಕರ ವರದಿ ಪಡೆದು ನಂತರ ಪಡಿತರ ಚೀಟಿಯನ್ನು ಆದ್ಯತೇತರ ಪಡಿತರ ಚೀಟಿಗಳಾಗಿ ಪರಿವರ್ತಿಸಲು ಕ್ರಮ ಕೈಗೊಳ್ಳಲಾಗಿದೆ. ಪಡಿತರ ಚೀಟಿಗಳನ್ನು ನೀಡುವ ಮತ್ತು ರದ್ದು ಪಡಿಸುವ ಅಧಿಕಾರ ಆಯಾ ತಾಲ್ಲೂಕಿನ ಆಹಾರ ನಿರೀಕ್ಷಕರಿಗೆ ವಹಿಸಲಾಗಿರುತ್ತದೆ. |

| | | |
|---|---|---|
| ಉ | ಹೊಸ ಬಿ.ಪಿ.ಎಲ್ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿರುವ ಅರ್ಹ ಫಲಾನುಭವಿಗಳಿಗೆ ಅರ್ಜಿ ಸಲ್ಲಿಸಿದ ದಿನಾಂಕದಿಂದ ಎಷ್ಟು ಸಮಯದ ಒಳಗಾಗಿ ಅವರಿಗೆ ಪಡಿತರ ಚೀಟಿಯನ್ನು ನೀಡಲಾಗುತ್ತದೆ; ಅರ್ಜಿ ಸಲ್ಲಿಸಲು ಯಾವ ಕಾಲಮಿತಿ ಇರುತ್ತದೆ? (ಸಂಪೂರ್ಣ ಮಾಹಿತಿಯನ್ನು ನೀಡುವುದು) | ಹೊಸ ಆದ್ಯತಾ ಪಡಿತರ ಚೀಟಿ ಕೋರಿ ಸಲ್ಲಿಸಿರುವ ಅರ್ಜಿಗಳ ಅರ್ಹತೆ ಹಾಗೂ ವಾಸಸ್ಥಳಕ್ಕೆ ಸಂಬಂಧಿಸಿದಂತೆ ಪರಿಶೀಲನಾ ಕಾರ್ಯ ಪ್ರಗತಿಯಲ್ಲಿದೆ. |

ಆನಾಸ 175 ಡಿಆರ್‌ಎ 2022 (ಇ-ಆಫೀಸ್)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ